# ಕರ್ನಾಟಕ ಸರ್ಕಾರ

ಸಂ:ಸಕನಿ/ಸಿಬ್ಬಂದಿ-1/ಸಿಆರ್-15/2021-22

ಸಮಾಜ ಕಲ್ಯಾಣ ಆಯುಕ್ತರ ಕಛೇರಿ.
5ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:03/01/2022

## ಅಧಿಕೃತ ಜ್ಞಾಪನ

ವಿಷಯ : ಸಮಾಜ ಕಲ್ಯಾಣ ಇಲಾಖೆಯ ಗ್ರೂಪ್-ಬಿ ವೃಂದದ ಸಹಾಯಕ ನಿರ್ದೇಶಕರು ಗ್ರೇಡ್-2/ತತ್ಸಮಾನ ಹುದ್ದೆಯ ತಾತ್ಕಾಲಿಕ ಜೇಷ್ಟತಾ ಪಟ್ಟಿಯನ್ನು ದಿನಾಂಕ:31-12-2021 ಕ್ಕೆ ಅಂತ್ಯಗೊಂಡಂತೆ ದಿನಾಂಕ: 01-01-2022 ರಲ್ಲಿದ್ದಂತೆ ಪ್ರಕಟಿಸುವ ಕುರಿತು.

ಉಲ್ಲೇಖ: 1 ಕರ್ನಾಟಕ ಸರ್ಕಾರಿ ನೌಕರರ (ಜೇಷ್ಟತಾ) ನಿಯಮಗಳು, 1957
2 ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಡಿಪಿಎಆರ್ 48 ಎಸ್‌ಎಸ್‌ಆರ್ 75 ದಿನಾಂಕ:05-07-1976
3 ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 43 ಸೇನೆನಿ 87 ದಿನಾಂಕ:14-12-1987
4 ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 07 ಸೇನೆನಿ 96 ದಿನಾಂಕ:16-07-1996
5 ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 32 ಸೇನೆನಿ 2003 ದಿನಾಂಕ:10-06-2003
6 ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 3 ಎಸ್‌ಆರ್‌ಎಸ್ 2019 ದಿನಾಂಕ:04-06-2019
7 ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 106 ಸೇನೆನಿ 2021 ದಿನಾಂಕ:10-12-2021.

*******

ಕರ್ನಾಟಕ ಸರ್ಕಾರಿ ನೌಕರರ (ಜೇಷ್ಟತಾ) ನಿಯಮಗಳು, 1957 ರ ನಿಯಮ 10 ರಡಿ ಜೇಷ್ಠತಾ ನಿಯಮಗಳನ್ನು ಅನುಸರಿಸಿ ಪ್ರತಿಯೊಂದು ವೃಂದದ ಜೇಷ್ಟತಾ ಪಟ್ಟಿಯನ್ನು ಪ್ರತಿ ವರ್ಷ ನೇಮಕಾತಿ ಪ್ರಾಧಿಕಾರವು ಸಿದ್ಧಪಡಿಸಬೇಕಾಗಿರುತ್ತದೆ. ರಾಜ್ಯ ಸಿವಿಲ್ ಸೇವೆಯಲ್ಲಿನ ಹುದ್ದೆಗಳಿಗೆ ಸಂಬಂಧಿಸಿದಂತೆ, ಇಲಾಖಾ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನೇರ ನೇಮಕಾತಿ ಮತ್ತು ಮುಂಬಡ್ತಿ ಎರಡು ಮೂಲಗಳಿಂದ ಭರ್ತಿ ಮಾಡಲು ಅನುಪಾತ (Quota) ನಿಗದಿಪಡಿಸಿರುವಲ್ಲಿ, ನಿಗದಿತ ಅನುಪಾತದ ಪ್ರಕಾರ ನೇರ ನೇಮಕಾತಿ ಮತ್ತು ಮುಂಬಡ್ತಿ ಪಾಲಿನ ಹುದ್ದೆಗಳನ್ನು ಭರ್ತಿ ಮಾಡಲು ರಿಕ್ತ ಸ್ಥಾನ ಆಧಾರಿತವಾಗಿ ವರ್ಗೀಕರಣ ಮಾಡುವ ಕುರಿತು ಉಲ್ಲೇಖ(2) ಮತ್ತು (3) ರ ಸರ್ಕಾರದ ಅಧಿಕೃತ ಜ್ಞಾಪನದಲ್ಲಿ ಮಾರ್ಗಸೂಚಿಗಳನ್ನು ನೀಡಲಾಗಿರುತ್ತದೆ.

ಸದರಿ ಮಾರ್ಗಸೂಚಿಗಳಿಗೆ ಅನುಗುಣವಾಗಿ ಉಲ್ಲೇಖ(1) ರ ಸರ್ಕಾರಿ ನೌಕರರ ಜೇಷ್ಟತೆ ನಿಯಮಗಳನ್ವಯ ಜೇಷ್ಟತಾ ಪಟ್ಟಿಯನ್ನು ಸಿದ್ದಪಡಿಸಲು ಉಲ್ಲೇಖ(4) ರಿಂದ (6)ವರೆಗಿನ ಸರ್ಕಾರದ ಅಧಿಕೃತ ಜ್ಞಾಪನದಲ್ಲಿ ನಮೂನೆಯನ್ನು ನಿಗದಿಪಡಿಸಲಾಗಿದೆ. ಉಲ್ಲೇಖ(7) ರ ಅಧಿಕೃತ ಜ್ಞಾಪನದಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಅನುಪಾತದನ್ವಯ(Quota) ನೇರ ನೇಮಕಾತಿ ಮತ್ತು ಮುಂಬಡ್ತಿಗಾಗಿ ರಿಕ್ತ ಸ್ಥಾನ ಆಧಾರಿತ ವರ್ಗೀಕರಣ ಮಾಡುವ ಪದ್ಧತಿಯನ್ನು ರದ್ದುಪಡಿಸಿ, ಹುದ್ದೆ ಆಧಾರಿತ ವರ್ಗೀಕರಣ ಅನುಸರಿಸಿ ಭವಿಷ್ಯವರ್ತಿಯಾಗಿ ಭರ್ತಿ ಮಾಡಲು ಹಿಂದಿನ ಮಾರ್ಗಸೂಚನೆಗಳನ್ನು ಮಾರ್ಪಡಿಸಿ, ಪರಿಷ್ಕೃತ ಮಾರ್ಗಸೂಚನೆಗಳನ್ನು ನೀಡಲಾಗಿರುತ್ತದೆ. ಹಾಗೂ ಜೇಷ್ಟತಾ ಪಟ್ಟಿ ಸಿದ್ಧಪಡಿಸಲು